# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು, ಮಡಿಕೇರಿ.

**ನೇಮಕಾತಿ ಅಧಿಸೂಚನೆ ಸಂಖ್ಯೆ: 3/2018, ದಿನಾಂಕ: 14.12.2018**

ವಿಷಯ:- ಕೊಡಗು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ 04 ನಕಲು-ಬೆರಳಚ್ಚುಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:- 1. ಗೌರವಾನ್ವಿತ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: ಎಲ್.ಸಿ.ಎ II 128/2012 ದಿ: 18.09.2018.

2. ಈ ಕಛೇರಿ ನೇಮಕಾತಿ ಅಧಿಸೂಚನೆ ಸಂ:1/2014, ದಿ: 19.07.2014.

3. ಕಛೇರಿ ಟಿಪ್ಪಣಿ ಆದೇಶ ದಿನಾಂಕ: 14.12.2018.

✣ ✣ ✣ ✣

ಉಲ್ಲೇಖ-1ರಲ್ಲಿ ಕೊಡಗು ಜಿಲ್ಲಾ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ 03 ನಕಲು-ಬೆರಳಚ್ಚುಗಾರ ಹುದ್ದೆಗಳು ಹಾಗೂ ಉಲ್ಲೇಖ-2 ರಲ್ಲಿ ಹಿಂಬಾಕಿಯಾಗಿ ಉಳಿದಿರುವ 01 ನಕಲು-ಬೆರಳಚ್ಚುಗಾರ ಹುದ್ದೆ ಸೇರಿದಂತೆ ಒಟ್ಟು 04 ನಕಲು-ಬೆರಳಚ್ಚುಗಾರರ **(Typist-Copyist)** ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಮಡಿಕೇರಿ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/kodagu-onlinerecruitment ರಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: **31.12.2018** ರಿಂದ ದಿನಾಂಕ: **30.01.2019** ರ ರಾತ್ರಿ 11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು ಮತ್ತು ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: **31.01.2019** ಆಗಿರುತ್ತದೆ.

**ನಕಲು-ಬೆರಳಚ್ಚುಗಾರರು (Typist-Copyist ) : 04 ಹುದ್ದೆಗಳು**

ವೇತನ ಶ್ರೇಣಿ: ರೂ.21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.

ಪಿಂಚಣಿ ಸೌಲಭ್ಯ: ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31.03.2006ರ ನಿಯಮಗಳನ್ವಯ.

## ಹಿಂಬಾಕಿ ಹುದ್ದೆಯ ವರ್ಗೀಕರಣ

| ಪ್ರವರ್ಗ | ಗ್ರಾಮೀಣ ಅಭ್ಯರ್ಥಿ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | 1 |
| ಒಟ್ಟು | 1 | 1 |

## ಹೊಸ ಹುದ್ದೆಗಳ ವರ್ಗೀಕರಣ

| ಪ್ರವರ್ಗ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಇತರೆ | ಒಟ್ಟು |
|---|---|---|---|---|
| ಪರಿಶಿಷ್ಟ ಪಂಗಡ | 1 | - | - | 1 |
| 2ಎ | - | 1 | - | 1 |
| ಸಾಮಾನ್ಯ ವರ್ಗ | - | - | 1 | 1 |
| ಒಟ್ಟು | 1 | 1 | 1 | 3 |

**ಶೈಕ್ಷಣಿಕ ವಿದ್ಯಾರ್ಹತೆಃ**

**i)** ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

**ii)** ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯವರು ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು **(Typewriting Junior)** ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

**iii)** ಕಛೇರಿ ಕಾರ್ಯಕಲಾಪಗಳಿಗೆ ಸಂಬಂದಿಸಿದಂತೆ ಗಣಕಯಂತ್ರದ (ಕಂಪ್ಯೂಟರ್) ಜ್ಞಾನ ಅವಶ್ಯಕವಾಗಿರುತ್ತದೆ.

**ಆಯ್ಕೆ ವಿಧಾನಃ**

ಅ) ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

ಆ) ಅಭ್ಯರ್ಥಿಯು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚುಯಂತ್ರ/ಗಣಕಯಂತ್ರದಲ್ಲಿ ಬೆರಳಚ್ಚು ಮಾಡುವ "ಕೌಶಲ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಶೇಕಡವಾರು ಅಧಾರದ ಮೇಲೆ 1:5 ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು.

ಇ) ಯಾವುದೇ ವರ್ಗಗಳ ಮಹಿಳಾ ಅಭ್ಯರ್ಥಿ ಹಾಗೂ ಗ್ರಾಮೀಣ ಅಭ್ಯರ್ಥಿ ಮೀಸಲಾತಿ ಇರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯರಿಲ್ಲದಿದ್ದಲ್ಲಿ ಆ ಸ್ಥಾನಗಳಿಗೆ ಅದೇ ವರ್ಗಗಳ ಅರ್ಹ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಈ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಆಯಾ ಪ್ರವರ್ಗಗಳ ಅರ್ಹ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು.

**ವಯೋಮಿತಿಃ-**

C) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

D) ಗರಿಷ್ಟ ವಯೋಮಿತಿ B

ಸಾಮಾನ್ಯ ಅಭ್ಯರ್ಥಿಗಳಿಗೆ .................................. : 35 ವರ್ಷಗಳು

2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ .................... : 38 ವರ್ಷಗಳು

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1ರ ಅಭ್ಯರ್ಥಿಗಳಿಗೆ } : 40 ವರ್ಷಗಳು.

ಇ) ಮಾಜಿ ಸೈನಿಕರಿಗೆ, ವಿಧವೆಯರಿಗೆ ಮತ್ತು ಅಂಗವಿಕಲರಿಗೆ, ಜೀತಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರ ದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಾಗಿ ಪಡೆ ದಿಟ್ಟುಕೊಂಡಿರತಕ್ಕದ್ದು.

**F)** ಹಾಲಿ ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ ಸರ್ಕಾರಿ ನಿಯಾಮಾವಳಿಗಳನ್ವಯ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

ಅರ್ಜಿ ಸಲ್ಲಿಸುವ ವಿಧಾನಃ

ನಿಗದಿತ ಅರ್ಜಿ ಶುಲ್ಕ, ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿ | ಯಾವುದೇ ಶುಲ್ಕವಿಲ್ಲ |
| ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿ | ರೂ.150/- |
| ಸಾಮಾನ್ಯ ವರ್ಗ | ರೂ.300/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/kodagu-onlinerecruitment ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ **State Bank Collect** ಮೂಲಕ **online payment through net banking/credit card/debit card/challan download** ಸೌಲಭ್ಯದ ಮೂಲಕ ಪಾವತಿ ಮಾಡಬಹುದಾಗಿದೆ.

ಈ ರೀತಿ **net banking/credit card/debit card/challan download** ಸೌಲಭ್ಯದ ಮೂಲಕ ಶುಲ್ಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **printout** ಅನ್ನು ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು **ON-LINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3. ಅರ್ಹ ಅಭ್ಯರ್ಥಿಗಳಿಗೆ **SMS/E-Mail** ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.

4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

   ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 c.m. ಉದ್ದ x 3.6 c.m. ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

   ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

   ಇ) ಅಭ್ಯರ್ಥಿಯ ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 c.m ಉದ್ದ x 7.5 c.m. ಅಗಲವುಳ್ಳದ್ದಾಗಿರಬೇಕು ಮತ್ತು 25 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು.) ಅಪ್‌ಲೋಡ್ ಮಾಡಬೇಕು.

5. ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು/ಸಲ್ಲಿಸಲು ದಿನಾಂಕ : 30.01.2019 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

7. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

8. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

<u>ಇತರೆ ಸೂಚನೆಗಳು :-</u>

1. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.
2. ಸೇವಾ ನಿರತ ಅಭ್ಯರ್ಥಿಗಳು ತಮ್ಮ ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಸೇವಾ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಕಡ್ಡಾಯವಾಗಿ ಪಡೆದು ಇಟ್ಟುಕೊಂಡಿರತಕ್ಕದ್ದು.
3. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ ' ಯಲ್ಲಿ ಪ್ರವರ್ಗ 1ರ ಅಭರ್ಥಿಗಳು ನಮೂನೆ ಇ ಯಲ್ಲಿ ಮತ್ತು 2ಎ, 2ಬಿ, 3ಎ, ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ ಎಫ್‌ಯಲ್ಲಿ ಸಂಬಂದಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕರಿಸುವ ಕಡೆಯ ದಿನಾಂಕದೊಳಗೆ ಪಡೆದಿರತಕ್ಕದ್ದು
4. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/96/ಸೇನನಿ/2005, ದಿ: 10.08.2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂದಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

5. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

6. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿಃ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

7. ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಹಾಗೂ ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆಯಿಂದ ನಡತೆ ಪ್ರಮಾಣ ಪತ್ರಗಳನ್ನು ಪಡೆದಿರುತಕ್ಕದ್ದು.

8. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

9. ನಕಲು-ಬೆರಳಚ್ಚುಗಾರರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇಕಡಾ 50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಪಾಸು ಮಾಡತಕ್ಕದ್ದು

10. ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಸ್ಪರ್ಧಾತ್ಮಕ/ಕೌಶಲ್ಯ ಪರೀಕ್ಷೆ ನಡೆಸಲಾಗುವುದು.

11. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು.

12. ಆಯ್ಕೆಯ ಸಂಬಂದವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

13. ಈ ಅಧಿಸೂಚನೆಯಲ್ಲಿ ಹೊರಡಿಸಿರುವ ಹುದ್ದೆಗಳು ಬದಲಾವಣೆಯಾಗುವ ಸಾಧ್ಯತೆಯಿರುತ್ತದೆ.

14. ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ ಹಾಗೂ ತಾವು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಸಮಯದಲ್ಲಿ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗಿರುತ್ತದೆ.

15. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

**Sd/-**
ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಕೊಡಗು, ಮಡಿಕೇರಿ.

<u>ಪ್ರತಿಯನ್ನು</u>

1. ಮಹಾ ವಿಲೇಖಾನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಪತ್ರದೊಂದಿಗೆ ಸಲ್ಲಿಸಲಾಗಿದೆ.

<u>ಪ್ರತಿಯನ್ನು</u> ಃ-

1. ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ.
2. ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಕ್ಕೆ.
3. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ರಾಜ್ಯದ ಎರಡು ಪ್ರಮುಖ ಪತ್ರಿಕೆಗಳಲ್ಲಿ ಪ್ರಕಟಣೆಗಾಗಿ
4. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ ಬೆಂಗಳೂರು – ಇವರಿಗೆ ಪ್ರತಿಯನ್ನು ಕಳುಹಿಸುತ್ತಾ ಸದರಿ ಅಧಿಸೂಚನೆಯನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಒಂದು ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಕೋರಿದೆ.
5. ಜಿಲ್ಲಾಧಿಕಾರಿಗಳು ಮಡಿಕೇರಿ, ಕೊಡಗು ಜಿಲ್ಲೆ
6. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿಗಳು, ಕೊಡಗು, ಮಡಿಕೇರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
7. ಮಡಿಕೇರಿ ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.
8. ಮಡಿಕೇರಿ ಜಿಲ್ಲಾ ಗ್ರಂಥಾಲಯದ ಸೂಚನಾ ಫಲಕಕ್ಕೆ.
9. ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಮಡಿಕೇರಿ, ಕೊಡಗು ಜಿಲ್ಲೆ.
10. ಶಿರಸ್ತೇದಾರರು, ನಗದು ವಿಭಾಗದ ಜಿಲ್ಲಾ ನ್ಯಾಯಾಲಯ, ಮಡಿಕೇರಿ.
11. ಕಂಪ್ಯೂಟರ್ ವಿಭಾಗ, ಜಿಲ್ಲಾ ನ್ಯಾಯಾಲಯ, ಮಡಿಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ.

**Sd/-**
(ವಿ.ವಿ.ಮಲ್ಲಾಪುರ)
ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಕೊಡಗು, ಮಡಿಕೇರಿ.